# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 63 (01) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ವೈ.ಎಂ.ಸತೀಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 04.03.2025 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬಳ್ಳಾರಿ ಜಿಲ್ಲೆಯಲ್ಲಿನ ಕೆಲವು ಸ್ಪಾಂಜ್, ಐರನ್ ಮತ್ತು ಸ್ಟೀಲ್ ಕೈಗಾರಿಕೆಗಳಿಂದಾಗಿ ಭೂಮಿಯನ್ನು ಕಳೆದುಕೊಂಡು ಉದ್ಯೋಗ ಸಿಗುತ್ತದೆಂಬ ಭರವಸೆಯಲ್ಲಿದ್ದ ರೈತರಿಗೆ ಸದರಿ ಕೈಗಾರಿಕೆಗಳು ಉದ್ಯೋಗ ನೀಡದೆ ತಮ್ಮ ಹೊಣೆಗಾರಿಕೆಯಿಂದ ನುಣುಚಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರವು ಬಾಧಿತ ರೈತರಿಗೆ ಸಹಾಯ ಮಾಡುವುದೇ; ಬಂದಿದ್ದಲ್ಲಿ ಸಂತ್ರಸ್ಥ ರೈತರಿಗೆ ಸರ್ಕಾರವು ಯಾವ ರೀತಿ ನೆರವು ನೀಡಲಿದೆ; | ವಿವಿಧ ಸ್ಟೀಲ್ ಘಟಕಗಳಿಂದ ಭೂಮಿ ಕಳೆದಕೊಂಡ 829 ರೈತರಿಗೆ / ಸಂಬಂಧಿತರಿಗೆ ಉದ್ಯೋಗ ನೀಡಲಾಗಿದ್ದು, ಒಟ್ಟಾರೆ ಜಿಲ್ಲೆಯಲ್ಲಿ ವಿವಿಧ ಕೈಗಾರಿಕೆಗಳಿಂದ 21,055 ಜನ ಉದ್ಯೋಗದಲ್ಲಿ ತೊಡಗಿಕೊಂಡಿರುತ್ತಾರೆ. |
| ಆ | ಕೆಲವು ಕೈಗಾರಿಕೆಗಳು ಅತಿಯಾದ ಮಾಲಿನ್ಯವನ್ನುಂಟು ಮಾಡುತ್ತಿವೆಯೆಂಬ ವರದಿಗಳು ಬರುತ್ತಿದ್ದು, ಮಾಲಿನ್ಯ ನಿಯಂತ್ರಣಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು? | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸಮ್ಮತಿ ಪತ್ರವನ್ನು ಪಡೆದು, ಷರತ್ತುಗಳೊಂದಿಗೆ ಕಾರ್ಯ ನಿರ್ವಹಿಸುತ್ತಿರುತ್ತವೆ.<br><br>ಕೈಗಾರಿಕೆಗಳನ್ನು ಮಂಡಳಿಯಿಂದ ಕಾಲಕಾಲಕ್ಕೆ ಪರಿವೀಕ್ಷಣೆ ನಡೆಸುತ್ತಿದ್ದು, ಇದರೊಂದಿಗೆ ಕಾಲಕಾಲಕ್ಕೆ ವಾಯುಗುಣಮಟ್ಟ ಮಾಪನ ಕಾರ್ಯ, stack monitoring ಮತ್ತು ತ್ಯಾಜ್ಯ ನೀರಿನ ಮಾದರಿಗಳನ್ನು ಸಂಗ್ರಹಣೆ ಮಾಡಿ ಪ್ರಯೋಗಾಲಯಕ್ಕೆ ವಿಶ್ಲೇಷಣೆಗಾಗಿ ಸಲ್ಲಿಸಲಾಗುತ್ತಿರುತ್ತದೆ. ವಿಶ್ಲೇಷಣಾ ವರದಿಯನ್ನು ಆಧರಿಸಿ, ಮಂಡಳಿಯು ನಿಗಧಿ ಪಡಿಸಿದ ಮಾನಕಗಳಿಗಿಂತ ಹೆಚ್ಚಾಗಿದ್ದಲ್ಲಿ ಅಂತಹ ಕೈಗಾರಿಕೆಗಳ ವಿರುದ್ಧ ನೋಟೀಸ್ ಜಾರಿಗೊಳಿಸಲಾಗುತ್ತಿದೆ.<br><br>ಸದರಿ ಘಟಕಗಳು ಕೈಗೊಂಡ ಕ್ರಮವು ಸೂಕ್ತವಾಗದಿದ್ದಲ್ಲಿ ನಿಯಮಾನುಸಾರ ಮಂಡಳಿಯಿಂದ ಮುಂದಿನ ಕ್ರಮ ವಹಿಸಲಾಗುತ್ತದೆ. |

ಸಿಐ 41 ಎಸ್‌ಪಿಐ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು